ಜಲನಿರ್ಮಲ ಯೋಜನೆಯಲ್ಲಿ ಅವ್ಯವಹಾರ

3191 (3232); ಶ್ರೀ ಪ್ರಭು ಬಿ. ಚೌವ್ಹಾಣ್ (ಔರಾದ್)

ಅ) ಬೀದರ್ ಜಿಲ್ಲೆ, ಔರಾದ್ ತಾಲ್ಲೂಕಿನಲ್ಲಿ ಬರುವ ಬಳತ, ಚಾಂದೋರಿ, ಸಂತಪೂರ ಮತ್ತು ಕಮಲನಗರ ಗ್ರಾಮಗಳಲ್ಲಿ ಜಲ ನಿರ್ಮಲ ಯೋಜನೆಯಡಿ ಕುಡಿಯುವ ನೀರಿನ ಕಾಮಗಾರಿಗಳನ್ನು ಸರ್ಕಾರ ಕೈಗೊಂಡಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಯಡಿ ಕೈಗೆತ್ತಿಕೊಂಡಿರುವ ಕಾಮಗಾರಿಗಳ ಗುಣಮಟ್ಟ ಕಳಪೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಕಾಮಗಾರಿಗಳ ಕುರಿತಾಗಿ ಸರ್ಕಾರ ತನಿಖೆ ಆರಂಭಿಸಿದೆಯೇ;

ಈ) ಸದರಿ ತನಿಖಾ ವರದಿ ಸರ್ಕಾರದ ಕೈ ಸೇರಿದೆಯೇ;

ಉ) ಹಾಗಿದ್ದಲ್ಲಿ, ಈ ವರದಿಯ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು; (ಕಾಮಗಾರಿವಾರು ಗುಣಮಟ್ಟ ಹಾಗೂ ಕ್ರಮದ ವಿವರವನ್ನು ನೀಡುವುದು);

ಊ) ಈ ಯೋಜನೆಯ ಅವಧಿ ಮುಕ್ತಾಯವಾಗಿದ್ದು, ಕಾಮಗಾರಿಗಳು ಪೂರ್ಣವಾಗದಿರುವ ಬಗ್ಗೆ ಸರ್ಕಾರದ ಮುಂದಿನ ಕ್ರಮಗಳೇನು;

ಋ) ಈ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು?

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು)

ಅ) ಬೀದರ ಜಿಲ್ಲೆಯ ಔರಾದ್(ಬಿ) ತಾಲ್ಲೂಕಿನಲ್ಲಿ ಬರುವ ಬಳತ, ಚಾಂದೋರಿ, ಸಂತಪೂರ ಮತ್ತು ಕಮಲನಗರ ಗ್ರಾಮಗಳಲ್ಲಿ ವಿಶ್ವ

ಬ್ಯಾಂಕ್ ನೆರವಿನ ಹೆಚ್ಚುವರಿ ಅನುದಾನದ ಜಲ ನಿರ್ಮಲ ಯೋಜನೆಯಡಿ ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿರುತ್ತದೆ.

ಆ) ಬಂದಿದೆ.

ಇ) ಹೌದು

ಈ) ತನಿಖಾ ವರದಿಯನ್ನು ನಿರೀಕ್ಷಿಸಲಾಗುತ್ತಿದೆ.

ಉ) ತನಿಖಾ ವರದಿ ಸಲ್ಲಿಕೆಯಾದ ನಂತರ ಕಾಮಗಾರಿಗಳ ಗುಣಮಟ್ಟ ಕಳಪೆಯಾಗಿರುವುದು ಕಂಡು ಬಂದಲ್ಲಿ ನಿಯಮಾನುಸಾರ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು.

ಊ) ವಿಶ್ವ ಬ್ಯಾಂಕ್ ನೆರವಿನ ಜಲ ನಿರ್ಮಲ ಯೋಜನೆಯ ಎಲ್ಲಾ ಕಾಮಗಾರಿಗಳು ಡಿಸೆಂಬರ್–2014ಕ್ಕೆ ಮುಕ್ತಾಯಗೊಂಡಿರುತ್ತದೆ.

ಋ) ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿರುತ್ತದೆ.

ಮಕ್ಕಳ ವಿಶೇಷ ನ್ಯಾಯಾಲಯಗಳು

3193 (3228); ಶ್ರೀ ರಾಜೀವ್ .ಪಿ (ಕುಡಚಿ)

ಅ) ರಾಜ್ಯದಲ್ಲಿ ಮಕ್ಕಳ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಲಾಗಿರುವ ಜಿಲ್ಲೆಗಳು ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

ಆ) ಇಲ್ಲವಾದಲ್ಲಿ, ಸ್ಥಾಪನೆ ಮಾಡಲು ಸರ್ಕಾರದ ಮುಂದಿರುವ ಸಮಸ್ಯೆಗಳೇನು;

ಇ) ಈ ಸಮಸ್ಯೆಗಳ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಸದರಿ ನ್ಯಾಯಾಲಯಕ್ಕೆ ಬಂದ ಪ್ರಕರಣಗಳ ಸಂಖ್ಯೆ ಎಷ್ಟು ಮತ್ತು ಇತ್ಯರ್ಥವಾದ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)